ಮೊರಾರ್ಜಿ ವಸತಿ ನಿಲಯಕ್ಕೆ ಕಟ್ಟಡ ನಿರ್ಮಾಣ.

3395(4101) ಶ್ರೀ ಮಹದೇವ ಪ್ರಸಾದ್ ಹೆಚ್.ಎಸ್. (ಗುಂಡ್ಲುಪೇಟೆ) :— ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ಗುಂಡ್ಲುಪೇಟೆ ತಾಲ್ಲೂಕಿನಲ್ಲಿ ಮೊರಾರ್ಜಿ ವಸತಿಶಾಲೆ ಸ್ವಂತ ಕಟ್ಟಡ ಹೊಂದಲು ಕ್ರಮ ಕೈಗೊಳ್ಳಲಾಗಿದೆಯೇ?

ಆ) ಹಾಗಿದ್ದಲ್ಲಿ, ಈವರೆಗೆ ಕೈಗೊಂಡಿರುವ ಕ್ರಮಗಳೇನು?

ಇ) ತೆರಕಣಾಂಬಿ ಗ್ರಾಮದಲ್ಲಿ ಕಿರಿಯ ಕಾಲೇಜಿನವರೆಗೆ ಶಾಲೆಗಳು ಇದ್ದು ಇಲಾಖೆ ವತಿಯಿಂದ ವಸತಿ ನಿಲಯ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಈ) ಹಾಗಿದ್ದಲ್ಲಿ, ಕೈಗೊಂಡಿರುವ ಕ್ರಮಗಳೇನು?

ಶ್ರೀ ಹಾಗೋಡು ತಿಮ್ಮಪ್ಪ (ಸಮಾಜ ಕಲ್ಯಾಣ ಸಚಿವರು) :—

ಅ) ಹೌದು

ಆ) ಕಟ್ಟಡ ನಿರ್ಮಾಣವನ್ನು ಕರ್ನಾಟಕ ರಾಜ್ಯದ ಉದ್ಯಮ ಸಂಸ್ಥೆಗೆ ವಹಿಸಿದ್ದು, ಕಾಮಗಾರಿ ಸಧ್ಯದಲ್ಲಿ ಪ್ರಾರಂಭವಾಗಲಿದೆ.

ಇ) ಹೌದು

ಈ) ಪ್ರಸಕ್ತ ಸಾಲಿನಲ್ಲಿ ತೆರಕಣಾಂಬಿಯಲ್ಲಿ ವಿದ್ಯಾರ್ಥಿನಿಲಯ ಪ್ರಾರಂಭಿಸುವ ಪ್ರಸ್ತಾವ ಇರುವುದಿಲ್ಲ.

ಬಂಡಿಪುರ ರಾಷ್ಟ್ರೀಯ ಉದ್ಯಾನದಿಂದ ಸ್ಥಳಾಂತರಗೊಂಡವರಿಗೆ ಪುನರ್ ವಸತಿ ಕಲ್ಪಿಸುವುದು.

3396 (1102) ಶ್ರೀ ಮಹದೇವ ಪ್ರಸಾದ್ ಹೆಚ್.ಎಸ್. (ಗುಂಡ್ಲುಪೇಟೆ) :— ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ಗುಂಡ್ಲುಪೇಟೆ ತಾಲ್ಲೂಕು ಬಂಡೀಪುರದ ರಾಷ್ಟ್ರೀಯ ಉದ್ಯಾನದಿಂದ ಸ್ಥಳಾಂತರಗೊಂಡ ಹಾಡುಕುರುಬ ಜನಾಂಗದವರಿಗೆ ಪುನರ್ ವಸತಿ ಕಲ್ಪಿಸಲು ಕೈಗೊಂಡಿರುವ ಕ್ರಮಗಳೇನು?

ಆ) ಹಾಗಾದಲ್ಲಿ ಈವರೆಗೆ ನೀಡಲಾಗಿರುವ ಸೌಲಭ್ಯಗಳೇನು (ವಿವರ ಒದಗಿಸುವುದು)

ಇ) ಗುಂಡ್ಲುಪೇಟೆ ತಾಲ್ಲೂಕಿನಲ್ಲಿ ವಾಸಿಸುವ ಪರಿಶಿಷ್ಟ ಪಂಗಡದವರ ಸಂಖ್ಯೆ ಎಷ್ಟು ಅವರ ಆರ್ಥಿಕ ಪರಿಸ್ಥಿತಿ ಸುಧಾರಿಸಲು ಕೈಗೊಂಡಿರುವ ಕ್ರಮಗಳೇನು?